**ಕರ್ನಾಟಕ ಸರ್ಕಾರ**

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ಸಂಖ್ಯೆ: ಪಪೂಶಿ/ಶೈಶಾ-04/ದಾ.ಕೈ.ಮು/1/2017-18 ದಿನಾಂಕ:20-09-2017

# ಸುತ್ತೋಲೆ

**ವಿಷಯ:** 2017-18ನೇ ಸಾಲಿನ ಮಧ್ಯಂತರ ರಜೆಯನ್ನು ಪರಿಷ್ಕರಿಸಿರುವ ಬಗ್ಗೆ.

*****

ಪದವಿ ಪೂರ್ವ ಶಿಕ್ಷಣ ಇಲಾಖೆಯ ದಾಖಲಾತಿ ಕೈಪಿಡಿಯನ್ವಯ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಿಗೆ 2017-18ನೇ ಶೈಕ್ಷಣಿಕ ಸಾಲಿಗೆ ಮಧ್ಯಂತರ ರಜೆಯನ್ನು ದಿನಾಂಕ **08-10-2017 ರಿಂದ 22-10-2017 ರವರೆಗೆ** ನೀಡಲಾಗಿತ್ತು.

ದಸರಾ ಹಬ್ಬದ ಪ್ರಯುಕ್ತ ರಾಜ್ಯದ ದಕ್ಷಿಣಕನ್ನಡ, ಕೊಡಗು ಹಾಗೂ ಮೈಸೂರು ಜಿಲ್ಲೆಗಳ ಎಲ್ಲಾ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: **21-09-2017 ರಿಂದ 05-10-2017** ರವರೆಗೆ ಮಧ್ಯಂತರ ರಜೆಯನ್ನು ಪರಿಷ್ಕರಿಸಿ ಆದೇಶಿಸಲಾಗಿದೆ.

ದಕ್ಷಿಣಕನ್ನಡ, ಕೊಡಗು ಹಾಗೂ ಮೈಸೂರು ಜಿಲ್ಲೆಗಳಲ್ಲಿ ರಜೆಯ ನಂತರ ದಿನಾಂಕ 06-10-2017ರಿಂದ ಪದವಿ ಪೂರ್ವ ಕಾಲೇಜುಗಳನ್ನು ಪುನರಾರಂಭಿಸುವ ಕುರಿತು ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಎಲ್ಲಾ ಪದವಿ ಪೂರ್ವ ಕಾಲೇಜುಗಳಿಗೆ ಸುತ್ತೋಲೆಯ ಮುಖಾಂತರ ತಿಳಿಸಲು ಸೂಚಿಸಲಾಗಿದೆ. ರಜೆಯ ಅವಧಿಯಲ್ಲಿನ ಭಾನುವಾರಗಳಂದು ನಡೆಯುತ್ತಿರುವ ಆಂಗ್ಲ ಭಾಷಾ ವಿಶೇಷ ತರಗತಿಗಳನ್ನು ಮಾಮೂಲಿಯಂತೆ ಮುಂದುವರೆಸಲು ಕ್ರಮ ಕೈಕೊಳ್ಳುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ

1. ದಕ್ಷಿಣಕನ್ನಡ, ಕೊಡಗು ಹಾಗೂ ಮೈಸೂರು- ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ
2. ದಕ್ಷಿಣಕನ್ನಡ, ಕೊಡಗು ಹಾಗೂ ಮೈಸೂರು ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ –ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಸಂಬಂಧಿಸಿದ ಜಿಲ್ಲೆಗಳ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಿಗೆ – ಜಿಲ್ಲಾ ಉಪನಿರ್ದೇಶಕರ ಮೂಲಕ ಮುಂದಿನ ಕ್ರಮಕ್ಕಾಗಿ.
4. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
5. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
6. ಕಛೇರಿ ಪ್ರತಿ